ಆ) ಚಿತ್ರದುರ್ಗ ಕೊಪ್ಪಳ ಮತ್ತು ಬೀದರ್ ಜಿಲ್ಲೆಗಳ ಮುಂದುವರಿಕೆ ಶಿಕ್ಷಣ ಕೇಂದ್ರಗಳ ಸಾಮಗ್ರಿಗಳು ಕಳಪೆ ಗುಣಮಟ್ಟದ್ದಾಗಿದ್ದು ಖರೀದಿಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ದೂರು ಬಂದಿದೆ.

ಚಿತ್ರದುರ್ಗ, ಕೊಪ್ಪಳ ಮತ್ತು ಬೀದರ್ ಜಿಲ್ಲೆಗಳ ಮುಂದುವರಿಕೆ ಶಿಕ್ಷಣ ಕಾರ್ಯಕ್ರಮದ ಪರಿವೀಕ್ಷಣಾ ವರದಿಗಳನ್ನು ಜಿಲ್ಲಾ ಸಾಕ್ಷರತಾ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳು, ಚಿತ್ರದುರ್ಗ, ಕೊಪ್ಪಳ ಮತ್ತು ಬೀದರ್ ಜಿಲ್ಲೆ ಇವರಿಗೆ ಕಳುಹಿಸಲಾಗಿದೆ.

ಇ) ಜಿಲ್ಲಾ ಸಾಕ್ಷರತಾ ಸಮಿತಿಯ ಕಾರ್ಯದರ್ಶಿಗಳು ಸಮಿತಿಯ ತೀರ್ಮಾನದಂತೆ ಕಾರ್ಯನಿರ್ವಹಿಸಬೇಕಾಗಿದೆ. ಸಮಿತಿಯ ಕಾರ್ಯದರ್ಶಿಗಳು ಮತ್ತು ಕೆಲವು ಸಂಯೋಜಕರು ಕೇಂದ್ರಗಳ ಪ್ರೇರಕರಿಗೆ ಖರೀದಿ ವ್ಯವಹಾರದಲ್ಲಿ ತಪ್ಪು ಮಾರ್ಗದರ್ಶನ ನೀಡಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ಈ) ವಯಸ್ಕರ ಶಿಕ್ಷಣ (ಸಾಕ್ಷರತಾ) ನಿರ್ದೇಶನಾಲಯದ ಹೆಸರು ಲೋಕ ಶಿಕ್ಷಣ ನಿರ್ದೇಶನಾಲಯ ಎಂದು ಆಗಿದ್ದು, ಇದರ ಮೂಲಕ ನಡೆಸಲಾಗುತ್ತಿದೆ.

ಉ) ಕಳಪೆ ಗುಣಮಟ್ಟದ ಸಾಮಗ್ರಿಗಳನ್ನು ಖರೀದಿಸಿರುವುದರಿಂದ ನಿಖರವಾದ ಮೊತ್ತದ ಬಗ್ಗೆ ಮೇಲ್ಕಾಣಿಸಿದ ಜಿಲ್ಲೆಗಳಿಂದ ಪೂರ್ಣ ಪರಿಶೀಲನಾ ವರದಿಗಳನ್ನು ನಿರೀಕ್ಷಿಸಲಾಗುತ್ತಿದೆ.

ಆಲಮಟ್ಟಿ ಜಲಾಶಯದಲ್ಲಿನ ಮುಳುಗಡೆ ಪ್ರದೇಶ ವ್ಯಾಪ್ತಿಯಲ್ಲಿ ಆರೋಗ್ಯ ಕೇಂದ್ರ

309 (436) ಶ್ರೀ ಪೂಜಾರ್ ಪಿ.ಹೆಚ್. (ಬಾಗಲಕೋಟೆ) - ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಆಲಮಟ್ಟಿ ಜಲಾಶಯದಲ್ಲಿ ಮುಳುಗಡೆಯಾದ ಕಾರಣ ಜಿಲ್ಲಾ ಆಸ್ಪತ್ರೆಯನ್ನು ಪೂರ್ತಿಯಾಗಿ 8 ಕಿ.ಮೀ. ದೂರದ ನವನಗರದ ಹೊಸ ಕಟ್ಟಡಕ್ಕೆ ಸ್ಥಳಾಂತರಿಸಲಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಆಸ್ಪತ್ರೆಯ ಸ್ಥಳಾಂತರದ ಕಾರಣ ಮುಳುಗಡೆಯಾಗದೇ ಉಳಿದಿರುವ ಇನ್ನೂ 2/3 ರಷ್ಟು ಜನರಿಗೆ ಚಿಕಿತ್ಸೆಗೆ ತೊಂದರೆಯಾದ ಕಾರಣ ಹಳೇ ನಗರದಲ್ಲಿ ಮತ್ತೊಂದು 50 ಹಾಸಿಗೆಗಳ ಆಸ್ಪತ್ರೆಯನ್ನು ಪ್ರಾರಂಭಿಸುವುದಾಗಿ ಸರ್ಕಾರ ಘೋಷಿಸಿದ್ದು ನಿಜವೇ ;

ಇ) ಹಾಗಿದ್ದಲ್ಲಿ, ಪೂರ್ಣ ಸಿಬ್ಬಂದಿಯನ್ನೊಳಗೊಂಡ ಅಂಥ ಆಸ್ಪತ್ರೆಯನ್ನು ಯಾವಾಗ ಪ್ರಾರಂಭಿಸಲಾಗುವುದು ; ಈ ದಿಸೆಯಲ್ಲಿ ಆಗಿರುವ ಪ್ರಗತಿಗಳೇನು ; (ವಿವರ ನೀಡುವುದು) ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ.

ಆ) ನಿಜ

ಇ) ಪ್ರಾರಂಭಿಸಲಾಗಿದೆ. ಈಗ ಸದ್ಯಕ್ಕೆ ಮೂರು ಜನ ವೈದ್ಯಾಧಿಕಾರಿಗಳನ್ನು ಇಬ್ಬರು ಶುಶ್ರೂಷಕಿಯರನ್ನು, ಒಬ್ಬ ಕಿರಿಯ ಆರೋಗ್ಯ ಪುರುಷ ಸಹಾಯಕ ಹಾಗೂ ಒಬ್ಬ ನಾಲ್ಕನೇ

ದರ್ಜೆ ನೌಕರರನ್ನು ನೇಮಿಸಲಾಗಿದೆ. ಮರ್ಗಾಮಣಿ ಸಮಯದಲ್ಲಿ ಪೂರ್ಣ ಪ್ರಮಾಣದ ಸಿಬ್ಬಂದಿಯನ್ನು ನೇಮಕ ಮಾಡಲಾಗುವುದು.

ಬಾಗಲಕೋಟೆ ನಗರದ ವಿದ್ಯಾಗಿರಿ ವಲಯದಲ್ಲಿ ಗ್ರಂಥಾಲಯ ಸ್ಥಾಪನೆ

310 (437) ಶ್ರೀ ಪೂಜಾರ್ ಪಿ.ಹೆಚ್. (ಬಾಗಲಕೋಟೆ) - ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

1) ಬಾಗಲಕೋಟೆ ನಗರವು ಆಲಮಟ್ಟಿ ಜಲಾಶಯದಡಿಯಲ್ಲಿ ಮುಳುಗಲಿರುವ ಸೂಚನೆ ಮೇರೆಗೆ ವಿದ್ಯಾಗಿರಿ ವಲಯದಲ್ಲಿ ನಗರದ ಸುಮಾರು 2 ಸಾವಿರ ಜನ ಮನೆಗಳನ್ನು ನಿರ್ಮಿಸಿ ಅಲ್ಲಿ ವಾಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

2) ಆ ಜನತೆಗೆ ಸಾರ್ವಜನಿಕ ಗ್ರಂಥಾಲಯವಿರದ ಕಾರಣ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

3) ಹಾಗಿದ್ದಲ್ಲಿ, ವಿಶೇಷ ಪ್ರಕರಣವೆಂದು ಪರಿಗಣಿಸಿ ವಿದ್ಯಾಗಿರಿ ವಲಯದಲ್ಲಿ ಒಂದು ಗ್ರಂಥಾಲಯ ಸ್ಥಾಪನೆಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಾಬುರಾವ್ ಚವ್ಹಾಣ್ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು)

1) ದಿನಾಂಕ 16.11.2002 ಕಂದಾಯ ಇಲಾಖೆ ಆದೇಶದಲ್ಲಿ ಆಲಮಟ್ಟಿ ಜಲಾಶಯದ ನಿರ್ಮಾಣಕ್ಕೆ ಸಂಬಂಧಿಸಿದ ಪುನರ್ ವಸತಿ ಯೋಜನೆಯಡಿ ವಿಶೇಷ ಪ್ಯಾಕೇಜ್ ಕಾರ್ಯಕ್ರಮದನ್ವಯ ವಿದ್ಯಾಗಿರಿ ಪ್ರದೇಶವನ್ನು ಸೇರಿಸಿಕೊಳ್ಳಲಾಗಿದೆ.

2) ಹೌದು

3) ಸದ್ಯಕ್ಕೆ ಇಂತಹ ಪ್ರಸ್ತಾವನೆ ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ.

ಹುನಗುಂದ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಘಟಕದ ಸ್ಥಳಾಂತರ

311 (269) ಶ್ರೀ ರಾಜೇಂದ್ರ ವರ್ಮ (ಹುಲ್‌ಸೂರ್) - ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹುನಗುಂದ ತಾಲ್ಲೂಕಿನ ಚಿಕ್ಕ ಆದಾಪುರ ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ ಘಟಕವನ್ನು ಯಾವಾಗ ಮಂಜೂರು ಮಾಡಲಾಯಿತು ;

ಆ) ಈ ಘಟಕವು ಸುತ್ತಮುತ್ತಲಿನ ಜನತೆಗೆ ಸಮರ್ಪಕವಾಗಿ ಕಾರ್ಯನಿರ್ವಹಿಸದೆ ಸಿಬ್ಬಂದಿಯ ಕೊರತೆಯಿಂದಾಗಿ ಬಹುತೇಕ ನಿಷ್ಕ್ರಿಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ಈ ಘಟಕವನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಗ್ರಾಮದಿಂದ ಪಕ್ಕದಲ್ಲಿರುವ ಹಿರೇ ಆದಾಪುರ ಗ್ರಾಮಕ್ಕೆ ಸ್ಥಳಾಂತರಿಸುವ ಬಗ್ಗೆ ಈ ಭಾಗದ ಸಾರ್ವಜನಿಕರಿಂದ ಬೇಡಿಕೆ ಬಂದಿರುವುದು ನಿಜವಲ್ಲವೇ ;